# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

**ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ**

**ಚೌಡೇಶ್ವರಿ ವಾರ್ಡ್ ನಂ-02ರಲ್ಲಿ**

**ದಿನಾಂಕ: 21-05-2022 ರಂದು ನಡೆದ ಸಮಿತಿ ಸಭಾ ನಡವಳಿ.**

**ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.**

1. ಶ್ರೀ.ಕೆ.ಎ.ಶಾಂತರಾಜ್ ನೋಡಲ್ ಅಧಿಕಾರಿಗಳು.
2. ಶ್ರೀ.ಚಂದ್ರಕಾಂತ್‌ರಾಜ್ ಪಿ.ಎ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ. ವಿನಯ ಕುಮಾರ್ ಟಿ.ವಿ. ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ.ಬಾಬು ರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್.
5. ಶ್ರೀ.ಮಹಾಂತೇಶ್ ಉಜ್ಜನಿಕೊಪ್ಪ ಹಿರಿಯ ಆರೋಗ್ಯ ಪರಿವೀಕ್ಷಕರು.
6. ಶ್ರೀ.ರಂಗಸ್ವಾಮಿ, ಕಂದಾಯ ಪರಿವೀಕ್ಷಕರು ವಾರ್ಡ್-02.
7. ಶ್ರೀಮತಿ. ನಂದಶ್ರೀ. ಕಿರಿಯ ಆರೋಗ್ಯ ಪರಿವೀಕ್ಷಕರು

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1. ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಇತ್ತೀಚೆಗೆ ಬಿದ್ದ ಭಾರಿ ಮಳೆಯಿಂದಾಗಿ ಯಲಹಂಕ ಕೆರೆಯ ಕೋಡಿ ಪಕ್ಕದಲ್ಲಿ ರಾಜಕಾಲುವೆಯಲ್ಲಿ ಹೂಳು ತುಂಬಿದ್ದು, ಸಾರ್ವಜನಿಕರ ಮನೆಗಳಿಗೆ ನೀರು ನುಗ್ಗುವ ಸಂಭವ ಇರುವುದರಿಂದ ಈ ರಾಜಕಾಲುವೆಯಲ್ಲಿ ತುಂಬಿರುವ ಹೂಳನ್ನು ತೆರವುಗೊಳಿಸಲು ಸಭೆಯಲ್ಲಿ ಕೋರಲಾಯಿತು.

2. ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ಪ್ರದೇಶಗಳಲ್ಲಿ ದಿನಾಂಕ: 15-5-2022 ರಿಂದ 18-5-2022 ರವರೆಗೆ ಯಲಹಂಕ ನಗರದಲ್ಲಿ ಕರಗ ಮಹೋತ್ಸವ ನಡೆದಿದ್ದು, ಈ ರಸ್ತೆಗಳಲ್ಲಿ ಸ್ವಚ್ಚತಾ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

3. ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ಮುಖ್ಯರಸ್ತೆಗಳಲ್ಲಿ ಶೋಲ್ಡರ್ ಡ್ರೈನ್‌ಗಳನ್ನು ಸಮರ್ಪಕವಾಗಿ ಸ್ವಚ್ಚಗೊಳಿಸುವಂತೆ ಸಿಲ್ಟ್ ಅಂಡ್ ಟ್ರ್ಯಾಕ್ಟರ್ ನಿರ್ವಹಣೆ ಗುತ್ತಿಗೆದಾರರಿಗೆ ಸೂಚಿಸಲಾಯಿತು.

4. ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಪುಟ್ಟೇನಹಳ್ಳಿ ವಿನಾಯಕ ಬಡಾವಣೆಯಲ್ಲಿ ಬೀದಿ ದೀಪ ಉರಿಯುತ್ತಿಲ್ಲವೆಂದು ಸಭೆಯಲ್ಲಿ ನಾಗೇನಹಳ್ಳಿ ನಿವಾಸಿಗಳು ಕೋರಿದರು.

5. ಚೌಡೇಶ್ವರಿ ವಾರ್ಡ್ ನಂ–02ರ ವ್ಯಾಪ್ತಿಯಲ್ಲಿರುವ ಕೆಂಚೇನಹಳ್ಳಿ ಬಾಲಾಜಿ ಲೇಔಟ್ ರೈಲ್ವೆ ಗೇಟ್ ಹತ್ತಿರ ವಿದ್ಯುತ್ ಜಂಪ್ ಕಟ್ಟಾಗಿದ್ದು, ಸರಿಪಡಿಸಿಕೊಡುವಂತೆ ಸ್ಥಳಿಯರು ಕೋರಿದರು.

6. ಚೌಡೇಶ್ವರಿ ವಾರ್ಡ್ ನಂ–02ರ ವ್ಯಾಪ್ತಿಯಲ್ಲಿರುವ ಕೆಂಚೇನಹಳ್ಳಿ ಆಂಜೀನೆಯ ಸ್ವಾಮಿ ದೇವಸ್ಥಾನದ ಹತ್ತಿರ ಬೋರ್‌ವೆಲ್ ಮೋಟಾರ್ ಸುಟ್ಟು ಹೋಗಿದ್ದು, ಸರಿಪಡಿಸಲು ಕೋರಲಾಯಿತು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

23/05/2022
ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

23/5/2022
ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.